**ಡಾ. ಹೆಚ್.ಎನ್. ಗೋಪಾಲಕೃಷ್ಣ, ಭಾ.ಆ.ಸೇ.,**
ಆಯುಕ್ತರು

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

ಕಾರ್ಮಿಕ ಭವನ, ಡೈರಿ ಸರ್ಕಲ್ ಹತ್ತಿರ, ಬನ್ನೇರುಘಟ್ಟ ರಸ್ತೆ,
ಬೆಂಗಳೂರು - 560 029 ಕಛೇರಿ: 080 29753078
ಇಮೇಲ್ : labourcommissioner@karnataka.gov.in
labour.commissioner42@gmail.com
ವೆಬ್‌ಸೈಟ್ : www.labour.karnataka.gov.in

ಅ.ಸ.ಪತ್ರ ಸಂಖ್ಯೆ:ಕೆಎಸ್‌ಸಿಎಲ್‌ಇಪಿಎಸ್/ಸಿಎಎಲ್-04/ಸಿಆರ್-14/2024-25 ದಿನಾಂಕ: 31/01/2025

ಮಾನ್ಯರೇ,

ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಪ್ರತಿ ಜಿಲ್ಲೆಗಳಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು ಸ್ಥಾಪಿಸಲಾಗಿರುತ್ತದೆ. ಬಾಲ ಹಾಗೂ ಕಿಶೋರ ಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ)ಕಾಯ್ದೆ, 1986, ನಿಯಮಗಳು-2017(ಕೇಂದ್ರ/ರಾಜ್ಯ), ಎಸ್‌ಒಪಿ(ಕೇಂದ್ರ/ರಾಜ್ಯ) ಹಾಗೂ ರಾಜ್ಯ ಸರ್ಕಾರದಿಂದ ಬಾಲ ಕಾರ್ಮಿಕ ಪುನರ್ವಸತಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಬಾಲ ಹಾಗೂ ಕಿಶೋರ ಕಾರ್ಮಿಕ(ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಕಲಂ 17ರ ಪ್ರಾವಧಾನಗಳಡಿಯಲ್ಲಿ ಸರ್ಕಾರದ ಹನ್ನೊಂದು(11) ಇಲಾಖೆಗಳ ಅಧಿಕಾರಿಗಳನ್ನು ನಿರೀಕ್ಷಕರುಗಳನ್ನಾಗಿ ಸರ್ಕಾರವು ಅಧಿಸೂಚನೆ ಜಾರಿ ಮಾಡಿರುತ್ತದೆ ಮತ್ತು ಕಾಯ್ದೆಯ ಕಲಂ(16)ರಲ್ಲಿ ಪೊಲೀಸ್ ಇಲಾಖೆ ಹಾಗೂ ಕಾರ್ಮಿಕ ಇಲಾಖೆಯ ಅಧಿಕಾರಿಗಳು ನಿರೀಕ್ಷಕರುಗಳಾಗಿರುತ್ತಾರೆ.

ಕಾರ್ಮಿಕ ಇಲಾಖೆಯ ಅಧಿಕಾರಿಗಳು/ನಿರೀಕ್ಷಕರುಗಳನ್ನು ಹೊರತುಪಡಿಸಿ ಬೇರೆ ಯಾವುದೇ ಇಲಾಖೆಯ ಅಧಿಕಾರಿಗಳು/ನಿರೀಕ್ಷಕರುಗಳು ಬಾಲ ಹಾಗೂ ಕಿಶೋರ ಕಾರ್ಮಿಕ ಮೊಕದ್ದಮೆಗಳನ್ನು ದಾಖಲಿಸದೆ ಇರುವುದು ಕಂಡುಬಂದಿರುತ್ತದೆ. ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ತಮ್ಮ ಹಾಗೂ ಇತರೆ ಇಲಾಖೆಗಳ ಸಹಕಾರ ಹಾಗೂ ಸಮನ್ವಯದ ಅಗತ್ಯವಿರುತ್ತದೆ. ಆದ್ದರಿಂದ ಬಾಲಕಾರ್ಮಿಕ ಕಾಯ್ದೆಯಡಿ ಅಧಿಸೂಚಿಸಿದ 11 ಇಲಾಖೆಯ ಅಧಿಕಾರಿಗಳಿಗೆ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡು ಬಂದಲ್ಲಿ ತಕ್ಷಣವೇ ಪ್ರಕರಣ ದಾಖಲಿಸಲು ಕ್ರಮವಹಿಸಲು ನಿರ್ದೇಶನ ನೀಡಲು ಹಾಗೂ ಕಾರ್ಮಿಕ ನಿರೀಕ್ಷಕರಿಗೆ ಹಾಗೂ ಯೋಜನಾ ನಿರ್ದೇಶಕರು, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರಿಗೆ ಇಲಾಖೆಯಿಂದ ಯಾವುದೇ ವಾಹನ ಸೌಲಭ್ಯ ಒದಗಿಸಲಾಗಿರುವುದಿಲ್ಲವಾದ್ದರಿಂದ ಬಾಲ ಹಾಗೂ ಕಿಶೋರ ಕಾರ್ಮಿಕರ ಅನಿರೀಕ್ಷಿತ ತಪಾಸಣೆ ಹೋಗುವ ಸಂದರ್ಭದಲ್ಲಿ ಮೇಲ್ಕಂಡ ಹನ್ನೊಂದು(11) ಇಲಾಖೆಗಳಿಂದ ಪ್ರತಿ ದಿನ ಒಂದು ಇಲಾಖೆಯ ವಾಹನವನ್ನು (Rotation Basis) ಬಾಲ ಹಾಗೂ ಕಿಶೋರ ಕಾರ್ಮಿಕರ ತಪಾಸಣೆಗೆ ಒದಗಿಸಲು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಈ ಮೂಲಕ ಕೋರಿದೆ ಮತ್ತು ಕೆಲವು ಜಿಲ್ಲೆಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡು ಬಂದಾಗ ಪೊಲೀಸ್ ಇಲಾಖೆಯಿಂದ ಮೊಕದ್ದಮೆಗಳನ್ನು ದಾಖಲಿಸದೆ ಇರುವುದು ಕಂಡುಬಂದಿರುತ್ತದೆ. ಆದ್ದರಿಂದ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡುಬಂದಾಗ ತಕ್ಷಣವೇ ಪ್ರಕರಣ ದಾಖಲಿಸುವಂತೆ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಲು ಈ ಮೂಲಕ ಕೋರಿದೆ.

ಗೌರವಗಳೊಂದಿಗೆ,

ತಮ್ಮ ವಿಶ್ವಾಸಿ,
Gopalk

ಇವರಿಗೆ,

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

ಪ್ರತಿಯನ್ನು,

ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು-560001